# ಕರ್ನಾಟಕ ವಿಧಾನ ಪರಿಷತ್ತು

| | | |
|---|---|---|
| ಚುಕ್ಕೆ ಗುರುತಿಲ್ಲದ ಪ್ರಶ್ನೆ ಸಂಖ್ಯೆ | : | 459 |
| ವಿಧಾನ ಪರಿಷತ್ತಿನ ಸದಸ್ಯರ ಹೆಸರು | : | ಶ್ರೀ ಎಂ. ನಾಗರಾಜು (ವಿಧಾನ ಸಭಾ ಕ್ಷೇತ್ರ) |
| ಉತ್ತರಿಸಬೇಕಾದ ದಿನಾಂಕ | : | 10.03.2025 |
| ಉತ್ತರಿಸುವ ಸಚಿವರು | : | ಆಹಾರ, ನಾಗರಿಕ ಸರಬರಾಜು ಮತ್ತು ಗ್ರಾಹಕರ ವ್ಯವಹಾರಗಳ ಹಾಗೂ ಕಾನೂನು ಮಾಪನಶಾಸ್ತ್ರ ಇಲಾಖೆ ಸಚಿವರು |

<table>
<tr><th>ಕ್ರ. ಸಂ</th><th>ಪ್ರಶ್ನೆ</th><th>ಉತ್ತರ</th></tr>
<tr><td>ಅ</td><td>ರಾಜ್ಯದಲ್ಲಿರುವ ಬಿ.ಪಿ.ಎಲ್ ಹಾಗೂ ಎ.ಪಿ.ಎಲ್ ಕಾರ್ಡ್‌ದಾರರ ಸಂಖ್ಯೆ ಎಷ್ಟು;</td><td>ರಾಜ್ಯದಲ್ಲಿ ಪ್ರಸ್ತುತ ಪಡಿತರ ಚೀಟಿ ಪಡೆದು ಕುಟುಂಬಗಳ ಸಂಖ್ಯೆ ಈ ಕೆಳಕಂಡಂತಿರುತ್ತದೆ.
<table>
<tr><td>ಪಡಿತರ ಚೀಟಿ ವಿಧ</td><td>ಪಡಿತರ ಚೀಟಿಗಳು</td></tr>
<tr><td>ಅಂತ್ಯೋದಯ ಪಡಿತರ ಚೀಟಿ (AAY)</td><td>10,80,157</td></tr>
<tr><td>ಆದ್ಯತಾ ಪಡಿತರ ಚೀಟಿ (PHH)</td><td>1,17,65,577</td></tr>
<tr><td>ಆದ್ಯತೇತರ ಪಡಿತರ ಚೀಟಿ (NPHH)</td><td>25,30,489</td></tr>
<tr><td>ಒಟ್ಟು</td><td>1,53,76,223</td></tr>
</table></td></tr>
<tr><td>ಆ</td><td>ಹೊಸ ಕಾರ್ಡ್‌ಗಳಿಗೆ ಬಂದಿರುವ ಅರ್ಜಿಗಳ ಸಂಖ್ಯೆ ಎಷ್ಟು; ಇವುಗಳನ್ನು ಯಾವ ಕಾಲಮಿತಿಯಲ್ಲಿ ವಿತರಿಸಲಾಗುವುದು;</td><td>ಹೊಸ ಪಡಿತರ ಚೀಟಿ ಕೋರಿ ಸಲ್ಲಿಕೆಯಾಗಿರುವ ಅರ್ಜಿಗಳ ವಿವರಗಳು ಈ ಕೆಳಗಿನಂತಿವೆ:
<table>
<tr><td>ವರ್ಷ</td><td>ಹೊಸ ಪಡಿತರ ಚೀಟಿ ಕೋರಿ ಸಲ್ಲಿಕೆಯಾಗಿರುವ ಅರ್ಜಿಗಳ ಸಂಖ್ಯೆ</td></tr>
<tr><td>2023-24</td><td>2,95,986</td></tr>
<tr><td>2024-25</td><td>97,464</td></tr>
<tr><td>ಒಟ್ಟು</td><td>3,93,450</td></tr>
</table>
ಹೊಸ ಆದ್ಯತಾ ಪಡಿತರ ಚೀಟಿಯನ್ನು ಕೋರಿ ಮಾರ್ಚ್ 2023ರ ವರೆಗೆ ಸಲ್ಲಿಕೆಯಾಗಿರುವ 2,95,986 ಅರ್ಜಿಗಳ ವಿಲೇವಾರಿ ಗೊಳಿಸಲು ಸರ್ಕಾರದ ಆದೇಶ ಸಂಖ್ಯೆ: ಆನಾಸ 211 ಡಿಆರ್‌ಎ 2021, ದಿನಾಂಕ: 29.09.2023 ರಲ್ಲಿ ಆದೇಶಿಸಲಾಗಿದ್ದು ಆದರಂತೆ ಕ್ರಮವಹಿಸಲಾಗಿರುತ್ತದೆ,<br>
• ಬಾಕಿ ಇರುವ ಅರ್ಜಿಗಳನ್ನು ಪರಿಶೀಲಿಸಿ, ಈಗಾಗಲೇ 2,04,760 ಆದ್ಯತಾ ಪಡಿತರ ಚೀಟಿಗಳನ್ನು ವಿತರಿಸಲಾಗಿರುತ್ತದೆ.</td></tr>
</table>

| | | |
|---|---|---|
| | | • ತುರ್ತು ವೈದ್ಯಕೀಯ ಪರಿಸ್ಥಿತಿಯ ಹಿನ್ನೆಲೆಯಲ್ಲಿ ಅರ್ಹರಿಗೆ ಆದ್ಯತಾ ಪಡಿತರ ಚೀಟಿ ನೀಡಲು ಹಾಗೂ ಪಡಿತರ ಚೀಟಿಯಲ್ಲಿನ ಹೆಸರು ಸೇರ್ಪಡೆ/ತಿದ್ದುಪಡಿಗೆ ಅವಕಾಶ ಕಲ್ಪಿಸಲಾಗಿದೆ.<br>• ಇ-ಶ್ರಮ್ ನೊಂದಾಯಿತ ಕಾರ್ಮಿಕರಿಗೆ ಹಾಗೂ ಬುಡಕಟ್ಟು ಜನಾಂಗದವರಿಗೆ ಹೊಸ ಆದ್ಯತಾ ಪಡಿತರ ಚೀಟಿಗಳನ್ನು ವಿತರಿಸಲು ಕ್ರಮವಹಿಸಲಾಗುತ್ತಿದೆ. |
| ಇ | ರಾಜ್ಯದಲ್ಲಿರುವ ಅನ್ನಭಾಗ್ಯ ಯೋಜನೆಯ ಅಂತ್ಯೋದಯ ಅನ್ನ ಯೋಜನೆಯ ಹಾಗೂ ಪಿ.ಹೆಚ್.ಹೆಚ್ ಯೋಜನೆಯ ಫಲಾನುಭವಿಗಳ ಸಂಖ್ಯೆ ಎಷ್ಟು; | ರಾಜ್ಯದಲ್ಲಿ ಪ್ರಸ್ತುತ ಅಂತ್ಯೋದಯ ಅನ್ನಯೋಜನೆ ಮತ್ತು ಪಿ.ಹೆಚ್.ಹೆಚ್ ಫಲಾನುಭವಿಗಳ ವಿವರ ಈ ಕೆಳಕಂಡಂತಿರುತ್ತದೆ.<br>ಪಡಿತರ ಚೀಟಿ ವಿಧ — ಫಲಾನುಭವಿಗಳ ಸಂಖ್ಯೆ<br>ಅಂತ್ಯೋದಯ ಅನ್ನ ಯೋಜನೆ (AAY) — 44,01,940<br>ಆದ್ಯತಾ ಪಡಿತರ ಚೀಟಿ(PHH) — 4,06,57,520<br>ಒಟ್ಟು — 4,50,59,460 |
| ಈ | ನೀತಿ ಆಯೋಗದ ಪ್ರಕಾರ ಬಡತನ ರೇಖೆಗಿಂತ ಕೆಳಗಿರುವ ಕುಟುಂಬಗಳ ಸಂಖ್ಯೆ ಎಷ್ಟು; ರಾಜ್ಯದಲ್ಲಿ ಬಡತನ ರೇಖೆಗಿಂತ ಕೆಳಗಿರುವ ಕುಟುಂಬಗಳ ಸಂಖ್ಯೆ ಎಷ್ಟು; ಇವುಗಳಲ್ಲಿ ಏನಾದರೂ ವ್ಯತ್ಯಾಸವಿದೆಯೇ; ಇದ್ದಲ್ಲಿ ಅನರ್ಹ ಬಿ.ಪಿ.ಎಲ್ ಕಾರ್ಡ್‌ಗಳನ್ನು ತೆಗೆದು ಹಾಕಲು ಸರ್ಕಾರ ಕೈಗೊಂಡಿರುವ ಕ್ರಮಗಳೇನು; | ನೀತಿ ಆಯೋಗದ ಬಹು ಆಯಾಮದ ಬಡತನ ಸೂಚ್ಯಂಕ ವರದಿ (Multi- Dimensional Poverty Index) ಪ್ರಕಾರ ಅಂದಾಜು ಶೇ.7.58% (2019-21) ಪ್ರತಿಶತ ಜನಸಂಖ್ಯೆ ಬಡವರೆಂದು ಗುರುತಿಸಲಾಗಿರುತ್ತದೆ.<br>ರಾಜ್ಯದಲ್ಲಿ ಆದ್ಯತಾ ಪಡಿತರ ಚೀಟಿಗಳನ್ನು ಹೊಂದಿರುವ ಕುಟುಂಬಗಳ ಸಂಖ್ಯೆ: **1,17,65,577** ಇರುತ್ತದೆ. ಆದಾಯ/ವ್ಯವಹಾರಕ್ಕೆ ಲಿಂಕ್ ಆಗಿರುವ ವೈಯಕ್ತಿಕ ದಾಖಲೆಗಳನ್ನು ಹೊಂದಿರುವ ಕಂದಾಯ ಇಲಾಖೆ, ಆದಾಯ ತೆರಿಗೆ ಇಲಾಖೆ ಮತ್ತು ಇ-ಆಡಳಿತ ಇಲಾಖೆಗಳೊಡನೆ ಸಮನ್ವಯ ಸಾಧಿಸಿ ಅವರಿಂದ ಪಡೆದ ಮಾಹಿತಿಯನ್ನು ಪರಿಶೀಲಿಸಿ ಅನರ್ಹ ಪಡಿತರ ಚೀಟಿದಾರರನ್ನು ಪತ್ತೆ ಹಚ್ಚಿ ಆದ್ಯತೇತರ ಪಡಿತರ ಚೀಟಿಗೆ ಪರಿವರ್ತನೆ ಮಾಡಲಾಗುತ್ತಿದೆ. ಇದೊಂದು ನಿರಂತರ ಪ್ರಕ್ರಿಯೆಯಾಗಿದ್ದು, ಕ್ರಮವಹಿಸಲಾಗುತ್ತಿದೆ. |
| ಉ | ರಾಜ್ಯ ಸರ್ಕಾರದ ವತಿಯಿಂದ ಅನ್ನಭಾಗ್ಯ ಯೋಜನೆಗೆ ಎಷ್ಟು ಅನುದಾನವನ್ನು ಮೀಸಲಿಡಲಾಗಿತ್ತು ಮತ್ತು ಖರ್ಚು ಮಾಡಲಾದ ಒಟ್ಟು ವೆಚ್ಚವೆಷ್ಟು; | **2024-25**ನೇ ಸಾಲಿಗೆ ರಾಜ್ಯ ಸರ್ಕಾರದ ವತಿಯಿಂದ ಅನ್ನಭಾಗ್ಯ ಯೋಜನೆಗೆ ಸಂಬಂಧಿಸಿದಂತೆ ರೂ. **165508.00** ಲಕ್ಷಗಳ ಅನುದಾನವನ್ನು ಮೀಸಲಿಟ್ಟಿದ್ದು, ಸದರಿ ಅನುದಾನದಲ್ಲಿ ರೂ. **92694.53** ಲಕ್ಷಗಳ (01.03.2025 ರವರೆಗೆ) ವೆಚ್ಚ ಭರಿಸಲಾಗಿದೆ. |

| | | |
|---|---|---|
| ಊ | ಬಿ.ಪಿ.ಎಲ್ ಕಾರ್ಡ್‌ಗಳನ್ನು ನಿಯಂತ್ರಿಸುವ ಕುರಿತು ಅಥವಾ ಅನರ್ಹ ಬಿ.ಪಿ.ಎಲ್ ಕಾರ್ಡ್‌ಗಳನ್ನು ತೆಗೆದುಹಾಕುವ ಬಗ್ಗೆ ಯಾವುದಾದರು ಕೇಂದ್ರ ಸರ್ಕಾರದ ಅಥವಾ ನ್ಯಾಯಾಲಯದ ಆದೇಶಗಳು ಇವೆಯೇ? | ಕೇಂದ್ರ ಸರ್ಕಾರದಿಂದ ಕಾಲಕಾಲಕ್ಕೆ ಪಡಿತರ ಚೀಟಿಗಳಿಂದ ಮೃತ ವ್ಯಕ್ತಿಗಳನ್ನು ತೆಗೆದು ಹಾಕುವುದು (Deletion of deceased beneficiaries), ನಕಲಿ ಫಲಾನುಭವಿಗಳ ಅಳಿಸುವಿಕೆ (Deletion of duplicate beneficiaries)<br>ಇತ್ಯಾದಿಗಳಿಗೆ ಸಂಬಂಧಿಸಿದಂತೆ ಆದ್ಯತಾ ಪಡಿತರ ಚೀಟಿಗಳನ್ನು ನಿಯಂತ್ರಿಸುವ ಕುರಿತು ನಿರ್ದೇಶನಗಳು ಬಂದಿದ್ದು, ಅದರಂತೆ ಕ್ರಮವಹಿಸಲಾಗುತ್ತಿದೆ. |

ಇ-ಆನಾಸ 71 ಡಿಆರ್ಎ 2025

(ಕೆ.ಹೆಚ್. ಮುನಿಯಪ್ಪ)
ಆಹಾರ, ನಾಗರಿಕ ಸರಬರಾಜು ಮತ್ತು ಗ್ರಾಹಕರ
ವ್ಯವಹಾರಗಳ ಹಾಗೂ ಕಾನೂನು ಮಾಪನಶಾಸ್ತ್ರ
ಇಲಾಖಾ ಸಚಿವರು